ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 29/12/20

### ಶಿಕ್ಷಾರ್ಹ ಅಪರಾಧವಾಗಿ ಪರಿಗಣಿಸಲು ಸಂಪುಟ ತೀರ್ಮಾನ

# ಗೋಹತ್ಯೆ ನಿಷೇಧಕ್ಕೆ ಸುಗ್ರೀವಾಜ್ಞೆ ಮಾರ್ಗ

29/12/20

**ಸಂ.ಕ,ಸಮಾಚಾರ ಬೆಂಗಳೂರು**

ಪ್ರತಿ ಪಕ್ಷಗಳ ತೀವ್ರ ಪ್ರತಿರೋಧದ ನಡುವೆಯೂ ಕರ್ನಾಟಕ ಗೋಹತ್ಯೆ ಪ್ರತಿಬಂಧಕ ಕಾಯ್ದೆಯನ್ನು ಸುಗ್ರೀವಾಜ್ಞೆ ಮೂಲಕ ಜಾರಿಗೊಳಿಸಲು ರಾಜ್ಯ ಸರ್ಕಾರ ಮಹತ್ವದ ತೀರ್ಮಾನ ಕೈಗೊಂಡಿದೆ.



ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಈ ವರ್ಷದ ಕೊನೆಯ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ಗೋಹತ್ಯೆ ನಿಷೇಧ ಕಾಯ್ದೆಗೆ ಸುಗ್ರೀವಾಜ್ಞೆ ಹೊರಡಿಸುವ ನಿರ್ಧಾರ ತೆಗೆದುಕೊಳ್ಳಲಾಗಿದ್ದು, ಇನ್ನೆರಡು ದಿನಗಳಲ್ಲಿ ರಾಜ್ಯಪಾಲ ವಜುಭಾಯಿ ವಾಲಾ ಅವರ ಅಂಕಿತಕ್ಕೆ ರವಾನೆಯಾಗಲಿದೆ.

ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರಿಗೆ ಮಾಹಿತಿ ಒದಗಿಸಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಅವರು, ಕರ್ನಾಟಕ ಗೋಹತ್ಯೆ ನಿಷೇಧ ಕಾಯ್ದೆಗೆ ಸುಗ್ರೀವಾಜ್ಞೆ ಹೊರಡಿಸುವ ತೀರ್ಮಾನ ಕೈಗೊಂಡಿದ್ದೇವೆ.

ರಾಜ್ಯದಲ್ಲಿ ಈ ಕಾಯ್ದೆ 1964ರಿಂದಲೂ ಜಾರಿಯಲ್ಲಿದೆ. ಹಿಂದಿನ ಕಾಯ್ದೆಯಲ್ಲಿ 12 ವರ್ಷ ಮೇಲ್ಪಟ್ಟ ಹಸು, 13 ವರ್ಷ ಮೇಲ್ಪಟ್ಟ ಎಮ್ಮೆಯನ್ನು ವಧೆ ಮಾಡಬಹುದೆಂಬ ನಿಯಮವಿತ್ತು. ಆದರೆ, ಹೊಸದಾಗಿ ಜಾರಿಯಾಗಿರುವ ಕಾಯ್ದೆಯಲ್ಲಿ ಜೀವಿತಾವಧಿವರೆಗೂ ಹಸು, ಎತ್ತುಗಳ ಹತ್ಯೆ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದರು.

- ಶಿಕ್ಷಾರ್ಹ ಅಪರಾಧವಾಗಿ ಪರಿಗಣನೆ
- ಸಚಿವ ಸಂಪುಟ ಸಭೆಯ ತೀರ್ಮಾನ
- ಶೀಘ್ರದಲ್ಲೇ ರಾಜ್ಯಪಾಲರಿಗೆ ರವಾನೆ
- ಜ.18ಕ್ಕೆ ಜಂಟಿ ಅಧಿವೇಶನ ಚಿಂತನೆ

ಈ ಕಾಯ್ದೆಯನ್ನು ಸರ್ಕಾರ ಹೊಸದಾಗಿ ಜಾರಿ ಮಾಡಿಲ್ಲ. ಹಿಂದೆ ಇದ್ದ ಕಾಯ್ದೆಗೆ ಕೆಲವು ತಿದ್ದುಪಡಿ ಮಾಡಲಾಗಿದೆ. ಗೋಮಾಂಸ ಮಾರಾಟ, ಭಕ್ಷಣೆ ಅಥವಾ ಚರ್ಮೋದ್ಯಮಕ್ಕೆ ಧಕ್ಕೆಯಾಗುವುದಿಲ್ಲ. ಕಾಯಿದೆಯಲ್ಲಿ ಯಾವುದೇ ರೀತಿಯ ನಿರ್ಬಂಧ ಹೇರಿಲ್ಲ. ಗೋಹತ್ಯೆ ಮಾಡಿದವರಿಗೆ ಈ ಮೊದಲು ಕಾನೂನು ಪ್ರಕಾರ ಶಿಕ್ಷೆಯಾಗುತ್ತಿರಲಿಲ್ಲ. ಈಗ ಇದು ಶಿಕ್ಷಾರ್ಹ ಅಪರಾಧವಾಗಲಿದೆ. ಹೊಸ ಕಾಯ್ದೆಯಂತೆ ಬದುಕಿರುವವರೆಗೂ ಹಸು ಅಥವಾ ಎತ್ತುಗಳ ವಧೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗುತ್ತದೆ. ಆದರೆ 13 ವರ್ಷಗಳ ಬಳಿಕ ಎಮ್ಮೆ, ಕೋಣಗಳ ಮಾಂಸ ಮಾರಾಟ ಹಾಗೂ ಸೇವನೆಗೆ ಅವಕಾಶ ಮಾಡಿಕೊಡಲಾಗುತ್ತದೆ ಎಂದು ಸಚಿವರು ಮಾಹಿತಿ ನೀಡಿದರು.

## ಜನವರಿ 1 ರಿಂದ ಶಾಲೆ ಆರಂಭ

**ಸಂ.ಕ,ಸಮಾಚಾರ ಬೆಂಗಳೂರು**

ಕೊರೊನಾ ತಾಂತ್ರಿಕ ಸಲಹಾ ಸಮಿತಿ ಶಿಫಾರಸ್ಸಿನಂತೆ ಈ ಹಿಂದೆಯೇ ತೀರ್ಮಾನಿಸಿದಂತೆ ರಾಜ್ಯದಲ್ಲಿ 10 ಮತ್ತು 12ನೇ ತರಗತಿ ಶಾಲಾ-ಕಾಲೇಜು ಜನವರಿ 1 ರ ಹೊಸವರ್ಷದಿಂದಲೇ ಕಾರ್ಯಾರಂಭ ಮಾಡಲಿದೆ.



ಸಿಎಂ ನೇತೃತ್ವದ ಸಚಿವ ಸಂಪುಟ ಸಭೆ ಈ ಬಗ್ಗೆ ಚರ್ಚಿಸಿದೆ. ಆದರೆ ನಿರ್ಣಯದ ಪರಮಾಧಿಕಾರವನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಬಿಡಲಾಗಿದೆ ಎಂದು ಕಾನೂನು ಸಚಿವ ಮಾಧುಸ್ವಾಮಿ ಮಾಧ್ಯಮಗಳಿಗೆ ಮಾಹಿತಿ ನೀಡಿದರು. ಈಗಾಗಲೇ ಎಲ್ಲ ಜಿಲ್ಲಾಡಳಿತಕ್ಕೆ ಸುರಕ್ಷತಾ ಕ್ರಮಗಳಿಗೆ ಸೂಚನೆ ನೀಡಲಾಗಿದ್ದು ಕಟ್ಟುನಿಟ್ಟಾಗಿ ಪಾಲಿಸಲು ಕ್ರಮ ಜರುಗಿಸುವಂತೆ ನಿರ್ದೇಶನ ಕೊಡಲಾಗಿದೆ. ಜೊತೆಗೆ ವಿದ್ಯಾಗಮ ಕಾರ್ಯಕ್ರಮ ಅಂದಿನಿಂದಲೇ 6 ರಿಂದ 9ನೇ ತರಗತಿಯವರೆಗೆ ಶಾಲಾವರಣದಲ್ಲಿಯೇ ಆರಂಭವಾಗಲಿದೆ.